ಸಿಬ್ಬಂದಿಗಳ ಕೊರತೆ

5376 (5414); ಶ್ರೀ ಮಾನಪ್ಪ ಡಿ. ವಜ್ಜಲ್ (ಲಿಂಗಸುಗೂರು)

ಅ) ಸ್ಥಳೀಯ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಅಧಿಕಾರಿಗಳು ಮತ್ತು ಸಿಬ್ಬಂದಿಗಳ ಕೊರತೆ ನೀಗಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು;

ಇ) ಇಂಜಿನಿಯರ್‌ಗಳು, ಕಂದಾಯ ಅಧಿಕಾರಿಗಳು, ಆರೋಗ್ಯ ನಿರೀಕ್ಷಕರು ಸೇರಿದಂತೆ ಮತ್ತಿತರ ಹುದ್ದೆಗಳ ಕೊರತೆ ವ್ಯಾಪಕವಾಗಿರುವುದನ್ನು ನೀಗಿಸಲು ಯಾವ ಮಾನದಂಡಗಳನ್ನು ಅನುಸರಿಸಲಾಗುತ್ತಿದೆ (ಸಂಪೂರ್ಣ ವಿವರ ನೀಡುವುದು)

ಡಾ: ಖಮರುಲ್ ಇಸ್ಲಾಂ (ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು)

ಅ) ಹೌದು.

ಆ) ನಗರ ಸ್ಥಳೀಯ ಸಂಸ್ಥೆಗಳಲ್ಲಿ ಖಾಲಿ ಇರುವ ಹುದ್ದೆಗಳಲ್ಲಿ 338 ಗ್ರೂಪ್ 'ಬಿ' ಮತ್ತು 'ಸಿ' ಹುದ್ದೆಗಳನ್ನು ಹಾಗೂ 2064 ಗ್ರೂಪ್ 'ಡಿ' ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯು ಸಹಮತಿ ನೀಡಿರುತ್ತದೆ.

ಗ್ರೂಪ್ 'ಬಿ' ಮತ್ತು 'ಸಿ' ಹುದ್ದೆಗಳನ್ನು ಭರ್ತಿ ಮಾಡಲು ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ಇವರ ಪತ್ರ ಸಂಖ್ಯೆ: 7817 ಡಿಎಂಎ:ಇನ್‌ಜಿ: ನೇಮಕಾತಿ: 2014–15 ದಿನಾಂಕ: 15.10.2015 ರನ್ವಯ ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಹಾಗೂ 2064 ಗ್ರೂಪ್ 'ಡಿ' ಹುದ್ದೆಗಳನ್ನು ಭರ್ತಿ

ಮಾಡಲು ದಿನಾಂಕ: 15.10.2015ರಂದು ಸಂಬಂಧಿಸಿದ ಜಿಲ್ಲಾ ಧಿಕಾರಿಗಳಿಗೆ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ಇವರು ಪತ್ರ ಬರೆದಿರುತ್ತಾರೆ.

ಮುಖ್ಯಾಧಿಕಾರಿ ಶ್ರೇಣಿ–1 ವೃಂದದಲ್ಲಿ ('ಬಿ' ವೃಂದದ ಹುದ್ದೆಗಳು) ಖಾಲಿ ಇರುವ 19 ಹುದ್ದೆಗಳನ್ನು ತುಂಬಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲು ದಿನಾಂಕ: 11.11.2015 ರಂದು ಸಿ.ಆ.ಸು.ಇಲಾಖೆಗೆ ಮಾಹಿತಿ ನೀಡಲಾಗಿದೆ.

ಇ) ಪೌರಾಡಳಿತ ಇಲಾಖೆಯಲ್ಲಿ ಖಾಲಿ ಇರುವ 12 ಸಹಾಯಕ ಇಂಜಿನಿಯರುಗಳು ಹಾಗೂ 34 ಕಿರಿಯ ಇಂಜಿನಿಯರುಗಳು ಮತ್ತು 129 ಹಿರಿಯ ಆರೋಗ್ಯ ನಿರೀಕ್ಷಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. ಕಂದಾಯಾಧಿಕಾರಿಗಳನ್ನು ಮುಂಬಡ್ತಿ ಮೂಲಕ ಭರ್ತಿ ಮಾಡಲು ಅವಕಾಶವಿದ್ದು, ಜೇಷ್ಠತಾ ಪಟ್ಟಿಯ ಅನುಸಾರ 2014–15ನೇ ಸಾಲಿನಲ್ಲಿ ಕಂದಾಯಧಿಕಾರಿ ಹುದ್ದೆ ಮುಂಬಡ್ತಿ ನೀಡಿರುವ ವಿವರ ಈ ಕೆಳಗಿನಂತೆ ಇರುತ್ತದೆ.

1. ಬೆಂಗಳೂರು ವಿಭಾಗ–16

2. ಮೈಸೂರು ವಿಭಾಗ–10

3. ಬೆಳಗಾವಿ ವಿಭಾಗ–14

4. ಕಲ್ಬುರ್ಗಿ ವಿಭಾಗದಿಂದ ಪ್ರಸ್ತಾವನೆ ಸಲ್ಲಿಸಲು ಕೋರಲಾಗಿದ್ದು, ಪೂರ್ಣ ಪ್ರಸ್ತಾವನೆ ಬಂದ ತಕ್ಷಣ ಮುಂಬಡ್ತಿ ನೀಡಲಾಗುವುದು.

ವೃಂದ ಮತ್ತು ನೇಮಕಾತಿ ನಿಯಮಗಳ ರೀತ್ಯಾ ಸಿಬ್ಬಂದಿಗಳ ನೇಮಕಾತಿಗಳನ್ನು ಮಾಡಿಕೊಳ್ಳಲಾಗುತ್ತದೆ.